ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 522

ಸದಸ್ಯರ ಹೆಸರು : ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 05.02.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಹೆಗ್ಗಡದೇವನ ಕೋಟೆಯಿಂದ ಮೈಸೂರಿಗೆ ಬೆಳಿಗ್ಗೆ 7 ರಿಂದ 10 ಮತ್ತು ಮೈಸೂರಿನಿಂದ ಹೆಗ್ಗಡದೇವನ ಕೋಟೆಗೆ ಸಂಜೆ 4 ರಿಂದ 7 ರವರೆಗೆ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಿ, ವಿದ್ಯಾರ್ಥಿಗಳು, ಸರ್ಕಾರಿ ನೌಕರರು, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲು ಸರ್ಕಾರ ಕ್ರಮ ತೆಗೆದುಕೊಳ್ಳಲಾಗುವುದೇ;	ಕ.ರಾ.ರ.ಸಾ.ನಿಗಮದ ವ್ಯಾಪ್ತಿಯ ಹೆಗ್ಗಡದೇವನ ಕೋಟೆಯಿಂದ ಮೈಸೂರಿಗೆ ಬೆಳಿಗ್ಗೆ 7 ಗಂಟೆಯಿಂದ 10 ಗಂಟೆವರೆಗೆ 30 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ ಹಾಗೂ ಮೈಸೂರಿನಿಂದ ಹೆಗ್ಗಡದೇವನ ಕೋಟೆಗೆ ಸಂಜೆ 4 ರಿಂದ 7 ಗಂಟೆಯವರೆಗೆ 30 ಸುತ್ತುವಳಿಗಳನ್ನು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಕಾರ್ಯಾಚರಣೆ ಮಾಡಲಾಗುತ್ತಿದೆ.
ಆ)	ಕರೋನ ಪರಿಸ್ಥಿತಿಯ ಕಾರಣ ಹೆಗ್ಗಡದೇವನ ಕೋಟೆ ಬಸ್ ಡಿಪೋನಿಂದ ಹಲವೆಡೆಗೆ ಹೋಗುವ ಗ್ರಾಮೀಣ ಬಸ್ ಸೌಲಭ್ಯ ಸ್ಥಗಿತವಾಗಿತ್ತೆ; ಈ ರೀತಿ ಸ್ಥಗಿತಗೊಂಡಿದ್ದ ಗ್ರಾಮೀಣ ಬಸ್ ಮಾರ್ಗಗಳಲ್ಲಿ ಬಸ್ ಸಂಚಾರವನ್ನು ಪುನರಾರಂಭ ಮಾಡಿ ಗ್ರಾಮೀಣ ಜನತೆಗೆ, ಶಾಲಾ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ;	ಹೌದು. ಹೆಗ್ಗಡದೇವನ ಕೋಟೆ ಘಟಕದಿಂದ ಪ್ರಸ್ತುತ 92 ಅನುಸೂಚಿಗಳು ಕಾರ್ಯಾಚರಣೆಯಲ್ಲಿರುತ್ತವೆ. ಸಾರ್ವಜನಿಕ ಪ್ರಯಾಣಿಕರು ಹಾಗೂ ವಿದ್ಯಾರ್ಥಿಗಳ ಅವಶ್ಯಕತೆಗೆ ಅನುಗುಣವಾಗಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಕೋವಿಡ್-19ರ ಹಿನ್ನೆಲೆಯಲ್ಲಿ, ಇನ್ನೂ ಹಲವಾರು ಶಾಲೆಗಳು ಪ್ರಾರಂಭವಾಗದಿರುವುದರಿಂದ, ಪ್ರಯಾಣಿಕರ ಲಭ್ಯತೆಗೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಹಂತಹಂತವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.
ಇ)	ಈ ಬಗ್ಗೆ ಸಾರ್ವಜನಿಕರು, ವಿದ್ಯಾರ್ಥಿಗಳು ಒತ್ತಾಯ ಮಾಡಿರುವುದು ಸಂಸ್ಥೆಯ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪರಿಶೀಲಿಸಿ ಕೂಡಲೇ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ?	ಗ್ರಾಮೀಣ ಭಾಗಗಳ ಬಸ್ ಮಾರ್ಗಗಳಲ್ಲಿ ಬಸ್ ಸಂಚಾರ ಕಲ್ಪಿಸುವ ಬಗ್ಗೆ ಮನವಿಗಳು ಬಂದಿರುವುದಿಲ್ಲ. ಪ್ರಸ್ತುತ ನಿಗಮದಿಂದ ಆಚರಣೆ ಮಾಡುತ್ತಿರುವ ಸಾರಿಗೆಗಳು ಅವಶ್ಯಕತೆಗೆ ಅನುಗುಣವಾಗಿರುತ್ತವೆ.

ಸಂಖ್ಯೆ: ಟಿಡಿ 40 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯ ಮಂತ್ರಿಗಳು ಹಾಗೂ
ಸಾರಿಗೆ ಸಚಿವರು